ಎತ್ತಿದ್ದು ನಿಜ. ಆದರೆ ನಿನ್ನೆ ನಾನು ಈ ರಿಸರ್ವೇಷನ್ ಬಗ್ಗೆ ರೂಲ್ 69ರಲ್ಲಿ ಅಲೊ ಮಾಡಿದ್ದೆ. ಒಂದು ಸಲ ರೂಲ್ 69ರಲ್ಲಿ ಅಲೊ ಮಾಡಿದ ಮೇಲೆ ಪುನಃ ನಾವು ನಿಲುವಳಿ ಸೂಚನೆಯನ್ನು ಇಲ್ಲಿ ಅಡ್ಮಿಟ್ ಮಾಡುವುದಕ್ಕಾಗಲೀ ಕೊನೆಗೆ ಸಬ್‌ಮಿಷನ್‌ಗಾಗಲೀ ಇಲ್ಲಿ ಅಲೋ ಮಾಡುವುದಕ್ಕಾಗುವುದಿಲ್ಲ. ಎರಡನೆಯದು ಸರ್ಕಾರಿ ಕೆಲಸ ಕುಂಠಿತವಾಗುತ್ತಿದೆ. ಬೇಡಿಕೆಗಳ ಬಗ್ಗೆ ಚರ್ಚೆಯನ್ನು ನಾವು ಕಳೆದ ಶುಕ್ರವಾರವೇ ಮಾಡಬೇಕಾಗಿತ್ತು.

ಶ್ರೀ ಪಿ.ಜಿ.ಆರ್.ಸಿಂಧ್ಯ: ನಾಳೆ ನಿಯಮ 69 ರಲ್ಲಿ ಅವಕಾಶ ಮಾಡಿಕೊಡಿ.

ಅಧ್ಯಕ್ಷರು: ಆಯಿತು. ನಾಳೆ ತೆಗೆದುಕೊಳ್ಳೋಣ.

ಬೇಡಿಕೆ ಸಂಖ್ಯೆ:50 - ವೈದ್ಯಕೀಯ ಶಿಕ್ಷಣ

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರು): ಮಾನ್ಯ ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2001ದಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ 'ವೈದ್ಯಕೀಯ ಶಿಕ್ಷಣ' ಇಲಾಖಾ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 218,20,67,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 250,00,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ) ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಬೇಡಿಕೆ ಸಂಖ್ಯೆ: 51 - ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರು): ಮಾನ್ಯ ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2001 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು'' ಇಲಾಖಾ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 751,20,15,000ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 87,33,00,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.